ಇ) ಅಂಡರ್‌ಬ್ರಿಡ್ಜ್ ನಿರ್ಮಾಣ ಮಾಡಲು ಸರ್ಕಾರವು ಹುಬ್ಬಳ್ಳಿ-ಧಾರವಾಡ ಬೈಪಾಸ್ ರಸ್ತೆಯನ್ನು ನಿರ್ಮಾಣ, ನಿರ್ವಹಣೆ ಹಾಗೂ ಹಸ್ತಾಂತರ (ಬಿಒಟಿ) ಆಧಾರದ ಮೇರೆಗೆ ನಿರ್ಮಿಸುತ್ತಿರುವ ನಂದಿ ಹೈವೆ ಡೆವಲಪರ್ಸ್ ಕಂಪನಿಗೆ ಸೂಚಿಸಿದೆ. ಸದರಿ ಕಾಮಗಾರಿಯು ಮುಕ್ತಾಯದ ಹಂತದಲ್ಲಿದೆ.

ಪಶು ಚಿಕಿತ್ಸಾಲಯಗಳನ್ನು ಮೇಲ್ದರ್ಜೆಗೇರಿಸುವುದರ ಬಗ್ಗೆ

1693 (2188) ಶ್ರೀ ಹಾಲಾಡಿ ಶ್ರೀನಿವಾಸ ಶೆಟ್ಟಿ (ಕುಂದಾಪುರ): ಮಾನ್ಯ ಪಶು ಸಂಗೋಪನೆ ಮತ್ತು ಸಕ್ಕರೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) 1999-2000ನೇ ಸಾಲಿನಲ್ಲಿ ರಾಜ್ಯದಲ್ಲಿ ಎಷ್ಟು ಪಶು ಚಿಕಿತ್ಸಾಲಯಗಳನ್ನು ಪಶುಸಂಗೋಪನಾ ಆಸ್ಪತ್ರೆಗಳಾಗಿ ಮೇಲ್ದರ್ಜೆಗೆ ಏರಿಸಲಾಗಿದೆ; (ವಿಧಾನ ಸಭಾವಾರು ಮಾಹಿತಿ ಒದಗಿಸುವುದು)

ಆ) ಮೇಲ್ದರ್ಜೆಗೆ ಸೇರಿಸಿದ ಎಲ್ಲಾ ಆಸ್ಪತ್ರೆಗಳು ಕಾರ್ಯನಿರ್ವಹಣೆ ಆರಂಭಿಸಿದೆಯೆ;

ಇ) 2000-2001ನೇ ಸಾಲಿನಲ್ಲಿ ಎಷ್ಟು ಪಶು ಚಿಕಿತ್ಸಾಲಯಗಳನ್ನು ಮೇಲ್ದರ್ಜೆಗೆ ಏರಿಸಲಾಗುವುದು;

ಈ) ಕುಂದಾಪುರ ವಿಧಾನ ಸಭೆಯ ಯಾವ ಪಶು ಚಿಕಿತ್ಸಾಲಯಗಳನ್ನು ಮೇಲ್ದರ್ಜೆಗೆ ಏರಿಸಲಾಗುವುದು?

ಶ್ರೀ ಎ.ಕೃಷ್ಣಪ್ಪ (ಪಶುಸಂಗೋಪನೆ ಮತ್ತು ಸಕ್ಕರೆ ಸಚಿವರು)

ಅ) ಯಾವುದೂ ಇಲ್ಲ

ಆ) ಉದ್ಭವಿಸುವುದಿಲ್ಲ

ಇ) ಉದ್ಭವಿಸುವುದಿಲ್ಲ

ಈ) ಉದ್ಭವಿಸುವುದಿಲ್ಲ

ಪಟ್ಟಣ ಮತ್ತು ಪುರಸಭೆ ವ್ಯಾಪ್ತಿಯ ರಸ್ತೆಗಳ ಕಾಂಕ್ರೀಟೀಕರಣ

1694 (2189) ಶ್ರೀ ಹಾಲಾಡಿ ಶ್ರೀನಿವಾಸ ಶೆಟ್ಟಿ (ಕುಂದಾಪುರ): ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ 1999-2000ನೇ ಸಾಲಿನಲ್ಲಿ ಎಷ್ಟು ಪಟ್ಟಣ ಪ್ರದೇಶಗಳಲ್ಲಿ ಎಷ್ಟು ಪ್ರಮಾಣದ ರಸ್ತೆಗಳನ್ನು ಕಾಂಕ್ರೀಟೀಕರಣಗೊಳಿಸಲಾಗಿದೆ;

ಆ) ಇನ್ನು ಎಷ್ಟು ಪಟ್ಟಣಗಳಲ್ಲಿ ನಗರ ಸಭೆ, ಪುರಸಭೆ ವ್ಯಾಪ್ತಿ ಸೇರಿ ರಸ್ತೆಗಳನ್ನು ಕಾಂಕ್ರೀಟೀಕರಣಗೊಳಿಸಲಾಗುವುದು;

ಇ) ಉಡುಪಿ ಜಿಲ್ಲೆಯ ಕುಂದಾಪುರ ಪುರಸಭಾ ವ್ಯಾಪ್ತಿಯ ಲೋಕೋಪಯೋಗಿ ಇಲಾಖೆಗೆ ಸೇರಿದ 1.6 ಕಿ.ಮೀ.ಉದ್ದದ ರಸ್ತೆಯನ್ನು ಕಾಂಕ್ರೀಟೀಕರಣಗೊಳಿಸುವ ಉದ್ದೇಶವಿದೆಯೆ; ಇದ್ದಲ್ಲಿ ಯಾವಾಗ ಕಾಂಕ್ರೀಟೀಕರಣಗೊಳಿಸಲಾಗುವುದು?